ಕೋಲಾರ ಡಿಸ್ಟ್ರಿಕ್ಟ್.

ತಾರೀಖು 17ನೇ ಜುಲೈ 1896.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

1. ಕಾಯಂಗುತ್ತಾ ಬಾಕಿದಾರರಾದ ಜಯ್ಯಾಚಾರ್ಯಂಗ ಬರಬೇಕಾದ ಕಾಯಂಗುತ್ತಾ ಬಾಕಿಗಾಗಿ ಇದರಡಿ ನಮೂದಾಗುವ ಫಾರ್‌ಫಿಟ್ಟಾದ ಸ್ಥಿರಸ್ವತ್ತು ಕೋಲಾರ ಡಿಸ್ಟ್ರಿಕ್ಟ್ ಮಾಲೂರು ತಾಲ್ಲೂಕು ಅಮೃದಾರ್ರ ಕಚೇರ್ನಲ್ಲಿ 1896ನೇ ಇಸವಿ ಆಗಸ್ಟ್ 29ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟ್ಯ ಇದೆ.

ಹರಾಜು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1895—96ನೇ ಸಾಲಿಗೆ ಪೂರ್ತಿಯಾಗಿ* ಪಾವತಿ ಮಾಡಬೇಕಾದ ಕಾಯಂಗುತ್ತಾ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಶೀಲ್ ಮೇರಿಗೆ 44—13—3 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜ್ ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯ್ತು ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟ್ ಯಾ ಮುಖ್ತಾರೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುಖ್ತಾರೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನು ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜು ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮ್ಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮ್ಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾಜು ಸರಟಿಫಿಕೇಟ್ ಅತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯ್ತು 30 ದಿವಸಗಳಲ್ಲಿ ಡೆಪ್ಯೂಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕಿದಾರನ ಹೆಸರು.	ಸ್ವತ್ತಿನ ತಪ್ಪೀಲ್. ಕಟ್ಟಡಗಳು. ಕಟ್ಟಿಸಿದ ಹೆಸರು	ಅಂದಾಜಾ ಕಿಮ್ಮತ್ತು.	ಜಮೀನು. ನಂಬರ್ ಅಥವಾ ಜಿ ಸರ್ವೇ ನಂಬರು.	ಖುಷ್ಕೀ ತರೀ ಬಾಗಾಯತು ಪರಂಪೋಕು	ವಿಸ್ತೀರ್ಣ.	ಬೆಲೆ.	ಸರ್ಕಾರಕ್ಕೆ ಬರಬೇಕಾದ ಸೋಟಿನ್ ಫೀ ಗ್ರೌರಿ ಸಹಿತವಾದ ಬಾಕಿ ಹೊಲಿಗಳು.
1	2	3	4	5	6	7	8	9	10	11
					ರೂ. ಆ. ಪೈ.			ಎಕರೆ. ಗುಂಟೆ.	ರೂ. ಆ ಪೈ.	ರೂ. ಆ. ಪೈ.
ಮೂಲೂರು	ಅಪ್ಪಕಲ್ಲು	ಬುಡನಹಳ್ಳಿ ಕಾಯಂಗೆ ಅರ್ಧ ಗ್ರಾನು	ಜಯ್ಯಾಜಾರಿ, ಅರ್ಧ ಗ್ರಾನು ಅನುಭವದಾರ	..	.. .. ..	ಅರ್ಧ ಗ್ರಾನು	ಖುಷ್ಕೀ ತರೀ ಬಾಗಾಯತು ಪರಂಪೋಕು	630 1 10 36 37 16 71 13	287 7 7	44 13 3
							ಟೋಟಲ್	749 26		ಬಡ್ಡಿ ನೋಟಿಸ್ ಫೀ ಸಹಿತವಾಗಿ ಕೊಡಬೇಕು.
							ಸಾಲಿಯಾನಾ ಸರ್ಕಾರಕ್ಕೆ ಕೊಡಬೇಕಾದ್ದು			195-9-8

ಸಿ. ಮಾದಯ್ಯ,
ಡೆಪ್ಯೂಟಿ ಕಮ್ಮಿಷನರ್.

ತುಮಕೂರ ಡಿಸ್ಟ್ರಿಕ್ಟು.

ಇಸ್ತಿಹಾರ್ ನಾಮೆ.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಸ್ಯ 1896—97ನೇ ಸಾಲಿಗೆ ಅಂದರೆ, 1896ನೇ ಜುಲೈ 1ನೇ ತಾರೀಖು ಲಾಗಾಯತು 1897ನೇ ಜೂ 30ನೇ ತಾರೀಖಿನ ವರಿಗೆ ಈ ಕೆಳಗೆ ಕಂಡ ತಾಲ್ಲೂಕುಗಳಲ್ಲಿರುವ ಸುರಂಗದ ಕಲ್ಲು ಜಮಾಯಿಸತಕ್ಕ ಹಕ್ಕನ್ನ ಆಯಾ ತಾಲ್ಲೂಕು ಕಚೇರಿಯಲ್ಲಿ ಈ ಕೆಳಗೆ ನಮೂದು ಮಾಡಲ್ಪಟ್ಟಿರುವ ತಾರೀಖುಗಳಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆ. ಹರಾಜ್ ಬೆಳಿಗ್ಗೆ 11 ಘಂಟೆಗೆ ಪುರು ಆಗುತ್ತೆ.

ತಾಲ್ಲೂಕು.	ತಾರೀಖು.	ಸ್ಥಳ.
ತಿಪ್ಟೂರ್	1896ನೇ ಆಗಸ್ಟ್ 22	ತಿಪ್ಟೂರ್
ಪಾವಗಡ	ಡಿಟೋ	ಪಾವಗಡ

2. ಅಮಲ್ದಾರು, ಅಥವಾ ಶಿರಸ್ತೇದಾರು ಹರಾಜು ಮಾಡಿಸುತ್ತಾರೆ.

3. ಚಡಸವಾಲ್ ಅಂಗೀಕರಿಸತಕ್ಕದ್ದು ತುಮಕೂರ ಡಿಸ್ಟ್ರಿಕ್ಟು ಡೆಪ್ಯೂಟಿ ಕಮ್ಮಿಷನರ್ ಸಾಹೆಬರವರ ಮುಂಜೂರಾತಿಗೆ ಬಳಪಟ್ಟಿರುತ್ತೆ.

4. ಹರಾಜು ಕಾಲದಲ್ಲಿ ಸವಾಲ್ ಮಾಡತಕ್ಕವರು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೋ ಅಥವಾ ಏಜಂಟರಾಗಿ ಸವಾಲ್ ಮಾಡುತ್ತಾರೋ ಆ ಸಂಗತಿಯನ್ನು ತಿಳಿಸಬೇಕು. ಏಜಂಟರಾಗಿ ಸವಾಲ್ ಮಾಡುವದಾದರೆ ತಾವು ಯಾರಿಗೋಸ್ಕರ ಸವಾಲ್ ಮಾಡುತ್ತಾರೋ ಅವರಿಂದ ಪಡದಿರುವ ಅಧಿಕಾರ ಪತ್ರಿಕೆಯನ್ನು ಹಾಜರ್ ಮಾಡಬೇಕು. ಇಲ್ಲವಾದರೆ ಅವರ ಸವಾಲ್ ತಿರಸ್ಕರಿಸಲ್ಪಡುತ್ತೆ.

5. ಚಡಸವಾಲ್‌ದಾರು, ಹರಾಜು ಕಾಲದಲ್ಲಿ ತಮ್ಮ ಸವಾಲ್ ಮೊಬಲಗ್ ಪೈಕಿ ಕೇಕಡಾ 25 ರೂಪಾಯಿ ಮೇರಿಗೆ ಡಿಪಾಜಿಟ್ ಮೊಬಲಗು ಹಾಜರ್ಮಾಡಬೇಕಲ್ಲದೆ ಹರಾಜು ಮುಂಜೂರ್ಮಾಡಲ್ಪಟ್ಟ ಸಂಗತಿ ಆಯಾ ತಾಲ್ಲೂಕು ಅಮಲ್ದಾರರಿಂದ ಚಡಸವಾಲ್‌ದಾರರಿಗೆ ತಿಳಿಸಲ್ಪಟ್ಟ ತಾರೀಖು ಲಾಗಾಯತು 7 ದಿವಸಗಳೊಳಗಾಗಿ ಚಡಸವಾಲ್ ಮೊಬಲಗಿನ ಮೇಲೆ ರೂಪಾಯಿ ವಂಡಕ್ಕೆ ವಂದು ಆಣೆಯುಂತೆ ಆಗುವ ಲೋಕಲ್ ಸೆಸ್ಸು ವೇಖೀಲ್ ಚಡಸವಾಲ್ ಮೊಬಲಗನ್ನ ಪಾವತಿ ಮಾಡಿದ್ದರೆ ಹಾಗೆ ಇಟ್ಟ ಡಿಪಾಜಿಟ್ ಮೊಬಲಗು ಸರಕಾರಕ್ಕೆ ದಂಡವಾಗಿ ತೆಗದುಕೊಳ್ಳಲ್ಪಡುತ್ತೆ.